2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು

**ಸಿ. ಸಿ. ನಂ.ಃ1005/2018**

ಆರೋಪಿಯ ಹೆಸರು ಎಸ್ ಮಾಲಯ್ಯ ಬಿನ್ ಲೇಃಸಿದ್ದಯ್ಯ,

ವಾಸ್ತವ್ಯ ನಂಃ68, ಎನ್ ಜಿ ಓ ಕಾಲೋನಿ, ನಂಜನಗೂಡು ಟೌನ್.
ಹಾಲಿ ವಾಸಃ ಮದುವಿನಹಳ್ಳಿ ಗ್ರಾಮ, ಕಸಬಾ ಹೋಬಳಿ, ಮಲೈ ಮಹಾದೇಶ್ವರ ಬೆಟ್ಟದ ರಸ್ತೆ,
ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.

ಅ. ಪ್ರ. ಸಂ. ಕಲಂ 313ರನ್ವಯ ಆರೋಪಿಯ ಹೇಳಿಕೆ

ಪ್ರಶ್ನೆ 1ಃ ನೀವು ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಉತ್ತರ ಃ

ಪ್ರಶ್ನೆ 2ಃ ಫ್ರಾಸಾ-1 ಎಸ್ ಸುಬ್ರಮಣ್ಣ ಇವರು ತಮ್ಮ ಸಾಕ್ಷ್ಯದಲ್ಲಿ ಹೇಳುವುದೇನೆಂದರೆ ಆರೋಪಿಯಾದ ನೀವು ಹಾಗೂ ಫ್ರಾಸಾ-1 ರವರು ಸ್ನೇಹಿತರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ಆರೋಪಿಯಾದ ನೀವು ನಿಮ್ಮ ದರದು ನಿಮಿತ್ತ ಅಂದರೆ ಕುಟುಂಬದ ಅವಶ್ಯಕತೆಗಾಗಿ ಮತ್ತು ಕೈ ಸಾಲವನ್ನು ತೀರಿಸುವುದಕ್ಕಾಗಿ ಫಿರ್ಯಾದಿದಾರರನ್ನು 2017 ನೇ ಇಸವಿ ಮೇ ತಿಂಗಳಿನಲ್ಲಿ ಭೇಟಿ ಮಾಡಿ ರೂ.3,00,000/- ಗಳನ್ನು ಸಾಲವಾಗಿ ಪಡೆದುಕೊಂಡು, ಸದರಿ ಸಾಲವನ್ನು 06 ತಿಂಗಳೊಳಗಾಗಿ ಮರುಪಾವತಿ ಮಾಡುವುದಾಗಿ ಒಪ್ಪಿರುತ್ತಾರೆ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 3 ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು ಆರೋಪಿಯಾದ ನೀವು ಸದರಿ ಸಾಲದ ಬಾಬ್ತು ನಿಮ್ಮ ಖಾತೆ ಹೊಂದಿರುವ ಕಾವೇರಿ ಗ್ರಾಮೀಣಾ ಬ್ಯಾಂಕ್, ಅಳಗಂಚಿ ಗ್ರಾಮ, ನಂಜನಗೂಡು ಶಾಖೆಯ ಚೆಕ್ ನಂಃ359223 ನ್ನು ರೂ.3,00,000/-ಗಳಿಗೆ ದಿಃ04.12.2017 ಎಂದು ನಮೂದಿಸಿ ಫ್ರಾಸಾ-1 ರವರಿಗೆ ನೀಡಿದ್ದು ಸದರಿ ಚೆಕ್ಕನ್ನು ಫ್ರಾಸಾ-1 ರವರು ನಗದೀಕರಣ ಪಡಿಸಲು ತಮ್ಮ ಖಾತೆಯಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ನಂಜನಗೂಡು ಶಾಖೆಗೆ ಹಾಜರುಪಡಿಸಿದಾಗ ಸಾಕಷ್ಟು ಹಣವಿಲ್ಲ ಎಂಬ ಹಿಂಬರಹದೊಂದಿಗೆ ದಿಃ06.12.2017 ರಂದು ವಾಪಸ್ಸು ಬಂದಿದ್ದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 4 ಫ್ರಾಸಾ-1 ರವರು ಮುಂದುವರೆದು ಅವರ ಪರ ವಕೀಲರ ಮೂಲಕ

ದಿ:19.12.2017 ರಂದು ಕಾನೂನು ರೀತ್ಯಾ ನೋಟಿಸನ್ನು ನೀಡಿದ್ದು, ಸದರಿ ನೋಟೀಸ್ ಜಾರಿಯಾಗದೇ "left without instruction " ಎಂಬ ಷರಾದೊಂದಿಗೆ ವಾಪಸ್ಸಾಗಿದ್ದು, ಈ ರೀತ್ಯಾ ನೀವು ಉತ್ತರವನ್ನು ನೀಡದೆ ಅಥವಾ ಹಣವನ್ನು ಮರುಪಾವತಿ ಮಾಡದೆ ಕಲಂ 138 ನೆಗೋಶಿಯಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಪ್ರಕಾರ ಅಪರಾಧ ಮಾಡಿರುವಿರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ :

ಪ್ರಶ್ನೆ 5 ಫ್ರಾಸಾ-1 ರವರು ಮುಂದುವರೆದು, ಆರೋಪಿಯಾದ ನೀವು ಫ್ರಾಸಾ1 ರವರಿಗೆ ನೀಡಿದ ಚಕ್ಕನ್ನು ನಿಪಿ-1 ಎಂದು, ಅದರಲ್ಲಿರುವ ತಮ್ಮ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕಿಗೆ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು ನೀಡಿದ ಹಿಂಬರಹವನ್ನು ನಿಪಿ-2 ರಂತೆ, ದಿ:19.12.2017 ರಂದು ವಕೀಲರ ಮೂಲಕ ಕಳುಹಿಸಿದ ನೋಟೀಸನ್ನು ನಿಪಿ-3 ರಂತೆ, ಹಿಂದಿರುಗಿದ ಎರಡು ಅಂಚೆಯನ್ನುನಿಪಿ-4 ಮತ್ತು 5 ಎಂದು, ಗುರುತಿಸಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ :

ಪ್ರಶ್ನೆ 6: ನಿಮಗೆ ಇನ್ನೂ ಏನಾದರೂ ಹೇಳುವುದು ಇದೆಯಾ?

ಉತ್ತರ :

**ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕ:26.10.2021 ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.**

2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ.
ನಂಜನಗೂಡು